## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬೆಳಗಾವಿ ಜಿಲ್ಲಾ ಪಂಚಾಯತ್ ಕಛೇರಿ/ಅಧಿಕಾರಿಗಳ ಉಪಯೋಗಕ್ಕಾಗಿ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ - ಆದೇಶ.

ಓದಲಾಗಿದೆ:- ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ ಇವರ ಪತ್ರ ಸಂಖ್ಯೆ:ಜಿಪಂ/ಆಡಳಿತ/ವಾಹನ/ಪಿವ- 01/21-22/ 2751, ದಿ:17.01.2022 ಮತ್ತು 2942, ದಿನಾಂಕ:08.2.2022.

ಪ್ರಸ್ತಾವನೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ ಇವರು ಮೇಲೆ ಓದಲಾದ ಪತ್ರಗಳಲ್ಲಿ ಜಿಲ್ಲಾ ಪಂಚಾಯತ್ ಕಾರ್ಯಾಲಯದಲ್ಲಿನ ಅಧಿಕಾರಿಗಳಿಗೆ ಹಾಗೂ ಅಧೀನ ಅಧಿಕಾರಿಗಳ ಬಳಕೆಗೆ ವಾಹನಗಳ ಲಭ್ಯವಿರುವುದಿಲ್ಲವೆಂದು, ಲಭ್ಯವಿರುವ ವಾಹನಗಳು ರಸ್ತೆಯ ಮೇಲೆ ಓಡಿಸುವುದು ಸೂಕ್ತವಲ್ಲವೆಂದು ಪ್ರಾದೇಶಿಕಾ ಸಾರಿಗೆ ಅಧಿಕಾರಿಗಳು ದೃಢೀಕರಣ ನೀಡಿರುತ್ತಾರೆಂದು ತಿಳಿಸಿ, ಅದರ ಪ್ರತಿಗಳೊಂದಿಗೆ ಪ್ರಸ್ತಾವನೆ ಸಲ್ಲಿಸಿ, ಲೆಕ್ಕ ಶೀರ್ಷಿಕೆ 2059 ಹಾಗೂ 2702 ಗಳಡಿಯಲ್ಲಿ ಐದು ಹೊಸ ವಾಹನ ಖರೀದಿಸಲು ಅನುಮತಿ ನೀಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ ಇವರ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ , ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 25 ಕೆ.ಎಸ್.ಎಸ್ 2022 , ಬೆಂಗಳೂರು, ದಿನಾಂಕ:21.03.2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪ್ರಸ್ತುತ ಉಪಯೋಗಿಸುತ್ತಿರುವ ಹಳೆಯ ವಾಹನಗಳನ್ನು ಅನುಪಯುಕ್ತಗೊಳಿಸುವ **ಷರತ್ತಿಗೊಳಪಟ್ಟು,**

(1) ಉಪ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯತ್, ಬೆಳಗಾವಿ.

(2) ಯೋಜನಾ ನಿರ್ದೇಶಕರು, ಜಿಲ್ಲಾ ಪಂಚಾಯತ್, ಬೆಳಗಾವಿ.

(3) ಕಾರ್ಯನಿರ್ವಾಹಕ ಅಧಿಕಾರಿ, ಅಥಣಿ ತಾಲ್ಲೂಕು ಪಂಚಾಯತ್ ಮತ್ತು.

(4) ಕಾರ್ಯನಿರ್ವಾಹಕ ಅಧಿಕಾರಿ, ಬೈಲಹೊಂಗಲ ತಾಲ್ಲೂಕು ಪಂಚಾಯತ್- ಇವರುಗಳ ಕಛೇರಿಯ ಉಪಯೋಗಕ್ಕಾಗಿ ತಲಾ ರೂ.6.50 ಲಕ್ಷ ಆರ್ಥಿಕ ಮಿತಿಯೊಳಗೆ (Ex-Room Rate) 04 (ನಾಲ್ಕು) ಹೊಸ

ವಾಹನಗಳನ್ನು ಖರೀದಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರವು ಅನುಮೋದನೆ ನೀಡಿದೆ.

1. ವೆಚ್ಚವನ್ನು 2021-22 ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾದ ಅನುದಾನದಲ್ಲಿ/ಜಿಲ್ಲಾ ಪಂಚಾಯತ್/ತಾಲ್ಲೂಕು ಪಂಚಾಯತ್ ನಿಧಿಯಿಂದ ಭರಿಸತಕ್ಕದ್ದು,
2. ಸದರಿ ವಾಹನವನ್ನು ಖರೀದಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯಮ ಹಾಗೂ ಅದರಡಿ ರಚಿಸಿರುವ ನಿಯಮಗಳನ್ನು ಪಾಲಿಸತಕ್ಕದ್ದು.
3. ಹೊಸ ವಾಹನ ಖರೀದಿಸುವ ಸಂದರ್ಭದಲ್ಲಿ ಇಂಧನ ಮಿತವ್ಯಯ ಹಾಗೂ ನಿರ್ವಹಣಾ ವೆಚ್ಚ ಕಡಿಮೆ ಹೊಂದಿರುವ ವಾಹನಗಳನ್ನು ಖರೀದಿಸುವುದು

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ 159 ವೆಚ್ಚ-6-2022(ಇ), ದಿನಾಂಕ:18.03.2022 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ

21/03/2022

(ಬಾಲಪ್ಪ)

ಸರ್ಕಾರದ ಅಧೀನ ಕಾರ್ಯದರ್ಶಿ

(ಸೇವೆಗಳು-ಬಿ ಮತ್ತು ಸಿ ಶಾಖೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ , ಬೆಂಗಳೂರು.
2. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆಂಪೇಗೌಡ ರಸ್ತೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ .
4. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಅಥಣಿ ಮತ್ತು ಬೈಲಹೊಂಗಲ
5. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-6)
6. ಶಾಖಾ ರಕ್ಷಾ ಕಡತ/ಗಣಕ ಕೋಶ/ಹೆಚ್ಚುವರಿ ಪ್ರತಿ

ಮಾಹಿತಿಗಾಗಿ

1. ಅಪರ ಮುಖ್ಯ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ